ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	476
ಮಾನ್ಯ ಸದಸ್ಯರ ಹೆಸರು	ಶ್ರೀ ಹೆಚ್. ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದವರು	ಅಬಕಾರಿ ಸಚಿವರು
ಉತ್ತರಿಸಬೇಕಾದ ದಿನಾಂಕ	24-09-2020

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಾದ್ಯಂತ ಈವರೆಗೆ ನವೀಕರಿಸದೆ ಉಳಿಸಿಕೊಂಡಿರುವ ಅಬಕಾರಿ ಪರವಾನಗಿಗಳ ಸಂಖ್ಯೆ ಎಷ್ಟು; ಈ ಪರವಾನಗಿಯಲ್ಲಿ ಕಾರ್ಯಾಚರಿಸುತ್ತಿರುವ ವರ್ತಕರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ;	2020-21ನೇ ಸಾಲಿಗೆ 10942 ಸನ್ನದುಗಳು ನವೀಕರಣಗೊಂಡಿದ್ದು, ಇನ್ನೂ 352 ಸನ್ನದುಗಳು ನವೀಕರಣಗೊಳ್ಳಲು ಬಾಕಿ ಇರುತ್ತದೆ. ಅಬಕಾರಿ ಕಾಯ್ದೆ ಮತ್ತು ನಿಯಮಗಳಡಿ ಸನ್ನದುಗಳನ್ನು ನವೀಕರಣಗೊಳಿಸದೇ ಕಾರ್ಯನಿರ್ವಹಿಸಲು ಅವಕಾಶವಿರುವುದಿಲ್ಲ.
ಆ)	ರಾಜ್ಯದಲ್ಲಿ ಹೊಸದಾಗಿ ನೀಡಲಾಗುತ್ತಿರುವ ಎಂ.ಎಸ್.ಐ.ಎಲ್ ಮಳಿಗೆಗಳ ಸಂಖ್ಯೆ ಎಷ್ಟು; ಹೊಸ ಎಂ.ಎಸ್.ಐ.ಎಲ್ ಮಳಿಗೆಗಳನ್ನು ಸ್ಥಾಪಿಸಲು ಇರುವ ಮಾನದಂಡಗಳೇನು; ಎಂ.ಎಸ್.ಐ.ಎಲ್ ನಿಂದ ಸರ್ಕಾರಕ್ಕೆ ಮತ್ತು ಮಳಿಗೆ ನಡೆಸುವವರಿಗೆ ಇರುವ ಲಾಭಗಳೇನು;	ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 07 ಇಎಫ್‌ಎಲ್ 2008 ದಿನಾಂಕ:03.07.2009 ರಲ್ಲಿ 463 ಸನ್ನದುಗಳನ್ನು ಹಾಗೂ ಸರ್ಕಾರದ ಪತ್ರ ಸಂಖ್ಯೆ: ಎಫ್‌ಡಿ 15 ಇಎಫ್‌ಎಲ್ 2015 ದಿ:23.09.2016 ರಲ್ಲಿ 900 ಸನ್ನದುಗಳನ್ನು ರಾಜ್ಯದಲ್ಲಿ ಎಂ.ಎಸ್.ಐ.ಎಲ್ ವತಿಯಿಂದ ಸ್ಥಾಪಿಸಲು ಈಗಾಗಲೇ ಹಂಚಿಕೆ ಮಾಡಲಾಗಿರುತ್ತದೆ. ರಾಜ್ಯದಲ್ಲಿ ಎಂ.ಎಸ್.ಐ.ಎಲ್ ಸನ್ನದುಗಳನ್ನು ಮಂಜೂರು ಮಾಡಲು ಸರ್ಕಾರ ಅನುಸರಿಸುವ ಮಾರ್ಗಸೂಚಿಗಳು ಕೆಳಕಂಡಂತಿವೆ: i. ಎಂ.ಎಸ್.ಐ.ಎಲ್ ಮಳಿಗೆಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968 ರ ನಿಯಮ-3(11-ಸಿ), 8, 8(ಎ) ಹಾಗೂ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ-5ರ ಪ್ರಕಾರ ನಿಬಂಧನೆಗಳನ್ನು ಪಾಲಿಸಿ ಮಂಜೂರು ಮಾಡಲು ಪೂರ್ವಾನುಮತಿ ನೀಡಲಾಗುವುದು. ii. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 07 ಇಎಫ್‌ಎಲ್ 2008 ದಿನಾಂಕ: 03.07.2009 ರಲ್ಲಿ ಪ್ರತಿ ತಾಲ್ಲೂಕಿಗೆ ಕನಿಷ್ಠ 2 ರಂತೆ 352 ಸನ್ನದುಗಳು, ಜಿಲ್ಲಾ ಕೇಂದ್ರಸ್ಥಾನಕ್ಕೆ 2 ರಂತೆ 58 ಸನ್ನದುಗಳು ಹಾಗೂ ಎಂಎಸ್‌ಐಎಲ್ ಸಂಸ್ಥೆ ಪ್ರಾದೇಶಿಕ ಬೇಡಿಕೆ ಅಧ್ಯಯನ ಆಧರಿಸಿ ಕೋರಿಕೆ ಸಲ್ಲಿಸುವ ಸ್ಥಳಗಳಿಗೆ 53 ಸನ್ನದುಗಳಂತೆ ಒಟ್ಟು 463 ಸನ್ನದುಗಳನ್ನು ಹಂಚಿಕೆ ಮಾಡಲಾಗಿದೆ. iii. ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಎಫ್‌ಡಿ 15 ಇಎಫ್‌ಎಲ್ 2015 ದಿ:23.09.2016 ರಲ್ಲಿ ಕೆಳಕಂಡ ಷರತ್ತುಗಳ

ಮೇಲೆ ಎಂ.ಎಸ್.ಐ.ಎಲ್ ಸಂಸ್ಥೆಗೆ ಒಟ್ಟು 900 ಸನ್ನದುಗಳನ್ನು ಹೆಚ್ಚುವರಿಯಾಗಿ ಮಂಜೂರು ಮಾಡಲು ಅನುಮೋದನೆ ನೀಡಲಾಗಿದೆ.

- ಎಂ.ಎಸ್.ಐ.ಎಲ್ ಸಂಸ್ಥೆಯೇ ತನ್ನ ವಾಣಿಜ್ಯ ಕಾರ್ಯಸಾಧ್ಯತೆಗೆ ಅನುಗುಣವಾಗಿ ಸನ್ನದುಗಳ ಸ್ಥಳವನ್ನು ನಿಗಧಿಗೊಳಿಸುವುದು. ಎಂ.ಎಸ್.ಐ.ಎಲ್ ಸಂಸ್ಥೆಯ ಅಧಿಕಾರಿಗಳು ಕರ್ನಾಟಕ ಅಬಕಾರಿ ಕಾಯ್ದೆಯನ್ವಯ ಮದ್ಯದಂಗಡಿಗಳನ್ನು ತೆರೆಯುವ ನಿರ್ದಿಷ್ಟ ಸ್ಥಳಗಳನ್ನು ಗುರುತಿಸುವುದು.
- ಈ ರೀತಿ ಗುರುತಿಸುವ ಸ್ಥಳಗಳು ಸರ್ಕಾರವು ತಿಳಿಸಿರುವ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲೇ ಇರಬೇಕು ಹಾಗೂ ನಿಗದಿಪಡಿಸಿರುವ ಸಂಖ್ಯೆಯ ಮಿತಿಯಲ್ಲೇ ಇರಬೇಕು.
- ಒಂದು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಿಂದ ಮತ್ತೊಂದು ವಿಧಾನಸಭಾ ಕ್ಷೇತ ವ್ಯಾಪ್ತಿಗೆ ವರ್ಗಾವಣೆ ಆಗದಂತೆ ನೋಡಿಕೊಳ್ಳತಕ್ಕದ್ದು.
- ಎಂ.ಎಸ್.ಐ.ಎಲ್ ಸಂಸ್ಥೆಯಿಂದ ಸನ್ನದು ಸ್ಥಳಗಳನ್ನು ಗುರುತಿಸಿ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ ನಂತರ ಅಂತಹ ಸನ್ನದು ಸ್ಥಳಗಳು ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5 ರನ್ವಯ ಆಕ್ಷೇಪಣಾ ರಹಿತ ಸ್ಥಳದಲ್ಲಿರುವಂತೆ ಹಾಗೂ ಇತರೆ ಸಂಬಂಧಿಸಿದ ನಿಯಮಗಳಿಗೆ ಪೂರಕವಾಗಿರುವಂತೆ ಸಂಬಂಧಪಟ್ಟ ಅಬಕಾರಿ ಉಪ ಆಯುಕ್ತರು ನೋಡಿಕೊಳ್ಳುವುದು.

iv. ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಎಫ್‌ಡಿ 08 ಇಎಫ್‌ಎಲ್ 2020 ದಿ:08.09.2020 ರಲ್ಲಿ ಈಗಾಗಲೇ ಮಂಜೂರು ಮಾಡಿರುವ ಒಟ್ಟು 900 ಸನ್ನದುಗಳ ಪೈಕಿ ಬಾಕಿ ಉಳಿದಿರುವ 441 ಸನ್ನದುಗಳನ್ನು ಕೆಳಕಂಡ ಷರತ್ತುಗಳ ಮೇಲೆ ಪ್ರಾರಂಭಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

- ಎಂ.ಎಸ್.ಐ.ಎಲ್ ಸಂಸ್ಥೆಯೇ ತನ್ನ ವಾಣಿಜ್ಯ ಕಾರ್ಯಸಾಧ್ಯತೆಗೆ ಅನುಗುಣವಾಗಿ ಸನ್ನದುಗಳ ಸ್ಥಳವನ್ನು ನಿಗಧಿಗೊಳಿಸುವುದು. ಎಂ.ಎಸ್.ಐ.ಎಲ್ ಸಂಸ್ಥೆಯ ಅಧಿಕಾರಿಗಳು ಕರ್ನಾಟಕ ಅಬಕಾರಿ ಕಾಯ್ದೆಯನ್ವಯ ಮದ್ಯದಂಗಡಿಗಳನ್ನು ತೆರೆಯುವ ನಿರ್ದಿಷ್ಟ ಸ್ಥಳಗಳನ್ನು ಗುರುತಿಸುವುದು.
- ಸಿಎಲ್-11(ಸಿ) ಕೋಟಾದಲ್ಲಿನ ಬಾಕಿ ಇರುವ 441 ಚಿಲ್ಲರೆ ಮದ್ಯ ಮಾರಾಟ ಸನ್ನದುಗಳ ಪೈಕಿ ಯಾವುದಾದರೂ ಸನ್ನದನ್ನು ಒಂದು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಿಂದ ಮತ್ತೊಂದು ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ವರ್ಗಾವಣೆ ಮಾಡುವುದಾದಲ್ಲಿ ಅದೇ ಜಿಲ್ಲೆಯ ಬೇರೆ ಯಾವುದಾದರೂ ಅಗತ್ಯವಿರುವ ವಿಧಾನಸಭಾ ಕ್ಷೇತ್ರಕ್ಕೆ ಕರ್ನಾಟಕ ಅಬಕಾರಿ

		(ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5 ರನ್ವಯ ಆಕ್ಷೇಪಣಾ ರಹಿತ ಸ್ಥಳಕ್ಕೆ ದಿನಾಂಕ:31.12.2020 ರೊಳಗೆ ವರ್ಗಾವಣೆ ಮಾಡಿಕೊಳ್ಳತಕ್ಕದ್ದು. • ಎಂ.ಎಸ್.ಐ.ಎಲ್ ಸಂಸ್ಥೆಯಿಂದ ಸನ್ನದು ಸ್ಥಳಗಳನ್ನು ಗುರುತಿಸಿ ಅಬಕಾರಿ ಇಲಾಖೆಗೆ ಸಲ್ಲಿಸಿದ ನಂತರ ಅಂತಹ ಸನ್ನದು ಸ್ಥಳಗಳು ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5 ರನ್ವಯ ಆಕ್ಷೇಪಣಾ ರಹಿತ ಸ್ಥಳದಲ್ಲಿರುವಂತೆ ಹಾಗೂ ಇತರೆ ಸಂಬಂಧಿಸಿದ ನಿಯಮಗಳಿಗೆ ಪೂರಕವಾಗಿರುವಂತೆ ಸಂಬಂಧಪಟ್ಟ ಅಬಕಾರಿ ಉಪ ಆಯುಕ್ತರು ನೋಡಿಕೊಳ್ಳತಕ್ಕದ್ದು. ಎಂ.ಎಸ್.ಐ.ಎಲ್ ಸಂಸ್ಥೆಗೆ ಮದ್ಯ ಮಾರಾಟಕ್ಕಾಗಿ ನೀಡಲಾಗುವ ಸಿಎಲ್–11ಸಿ ಸನ್ನದಿನಿಂದ ಗ್ರಾಹಕರಿಗೆ ಗುಣಮಟ್ಟದ ಮದ್ಯವನ್ನು ಎಂ.ಆರ್.ಪಿ ದರದಲ್ಲಿಯೇ ನೀಡಲಾಗುತ್ತಿದೆ. ಮದ್ಯ ಮಾರಾಟದಿಂದ ಸಂಗ್ರಹಣೆಯಾಗುವ ಅಬಕಾರಿ ಸುಂಕ ಹಾಗೂ ಹೆಚ್ಚುವರಿ ಅಬಕಾರಿ ಸುಂಕ ನೇರವಾಗಿ ರಾಜ್ಯದ ಬೊಕ್ಕಸಕ್ಕೆ ಸಂದಾಯವಾಗುತ್ತದೆ. ಸಿಎಲ್–11ಸಿ ಸನ್ನದು ಮಳಿಗೆಯನ್ನು ಎಂ.ಎಸ್.ಐ.ಎಲ್ ಸಂಸ್ಥೆಯವರೇ ನಡೆಸುವುದರಿಂದ ನಿಯಮಗಳಂತೆ ಮದ್ಯದ ವಹಿವಾಟಿನ ಶೇ.10ರಷ್ಟು ಲಾಭವನ್ನು ಸರ್ಕಾರಿ ಸ್ವಾಮ್ಯದ ಎಂ.ಎಸ್.ಐ.ಎಲ್ ಸಂಸ್ಥೆಯೇ ಗಳಿಸುತ್ತಿದೆ.
ಇ)	ರಾಜ್ಯದಲ್ಲಿ ಲಾಕ್ ಡೌನ್ ಸಂದರ್ಭದಲ್ಲಿ ಅಬಕಾರಿ ಇಲಾಖೆಗೆ ಆದ ನಷ್ಟವೆಷ್ಟು; ಮದ್ಯದಂಗಡಿಗಳನ್ನು ತೆರೆದು ನಂತರ ಇಲ್ಲಿಯವರೆಗೆ ಸರ್ಕಾರದ ಬೊಕ್ಕಸಕ್ಕೆ ಬಂದ ಹಣವೆಷ್ಟು; (ಅಂಕಿಅಂಶ ಸಹಿತ ಮಾಹಿತಿ ನೀಡುವುದು)	ದಿನಾಂಕ: 23.03.2020 ರಿಂದ 03.05.2020 ರವರೆಗೆ ಲಾಕ್‌ಡೌನ್ ಸಂದರ್ಭದಲ್ಲಿ ಮದ್ಯದಂಗಡಿಗಳನ್ನು ಮುಚ್ಚಿಸಿರುವುದರಿಂದ, ಈ ಅವಧಿಯಲ್ಲಿ ಯಾವುದೇ ರಾಜಸ್ವ ಸಂಗ್ರಹಣೆ ಆಗಿರುವುದಿಲ್ಲ. ಕಳೆದ ಸಾಲಿನ ಇದೇ ಅವಧಿಯಲ್ಲಿ ರೂ.1,795.57 ಕೋಟಿಗಳಷ್ಟು ಅಬಕಾರಿ ರಾಜಸ್ವ ಸಂಗ್ರಹವಾಗಿರುತ್ತದೆ. ಆದ್ದರಿಂದ, ಲಾಕ್‌ಡೌನ್ ಅವಧಿಯಲ್ಲಿ ರೂ.1,795.57 ಕೋಟಿಗಳಷ್ಟು ಆದಾಯದ ಕೊರತೆ ಉಂಟಾಗಿರುತ್ತದೆ. ದಿನಾಂಕ: 04.05.2020 ರಿಂದ ಲಾಕ್‌ಡೌನ್ ಅನ್ನು ತೆರವುಗೊಳಿಸಿ ಹಂತ ಹಂತವಾಗಿ ಮದ್ಯ ಮಾರಾಟ ಮಾಡಲು ಅನುಮತಿ ನೀಡಲಾಗಿದ್ದು, ದಿನಾಂಕ:04.05.2020 ರಿಂದ 31.08.2020 ರವರೆಗೆ ಮದ್ಯ ಮಾರಾಟದಿಂದ ರಾಜ್ಯ ಸರ್ಕಾರದ ಖಜಾನೆಗೆ ರೂ.7,581.80 ಕೋಟಿಗಳಷ್ಟು ಸಂಗ್ರಹವಾಗಿರುತ್ತದೆ.
ಈ)	ಆನ್ ಲೈನ್ ಮದ್ಯ ಮಾರಾಟದ ಪ್ರಸ್ತಾವನೆ ಈಗಲೂ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ, ಸರ್ಕಾರ ಆನ್ ಲೈನ್ ಮದ್ಯ ಮಾರಾಟ ಆರಂಭಿಸುತ್ತದೆಯೇ?	ಇಲ್ಲ.

ಆಇ 71 ಇಎಲ್‌ಕ್ಯೂ 2020

(ಹೆಚ್ ನಾಗೇಶ್)
ಅಬಕಾರಿ ಸಚಿವರು